ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದ ಪ್ರಮುಖ ನಗರಗಳ ಮೂಲಸೌಕರ್ಯಗಳ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) –

701 (820) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಪ್ರಮುಖ ನಗರಗಳ ಮೂಲಸೌಕರ್ಯ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ಮೀಸಲಿಟ್ಟ ಅನುದಾನವೆಷ್ಟು; (ಅಂಕಿ-ಅಂಶ ನೀಡುವುದು)

(ಆ) ರಾಜ್ಯದ ವಿವಿಧ ನಗರಗಳಲ್ಲಿ ರಸ್ತೆ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಪೂರ್ಣಗೊಂಡ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಸ್ತೆ ಮತ್ತು ಮೂಲಸೌಕರ್ಯ ಕಾಮಗಾರಿಯ ಗುತ್ತಿಗೆದಾರರು ವಿವಿಧ ಯೋಜನೆಗಳಲ್ಲಿ ಕಳಪೆ ಕಾಮಗಾರಿಗಳನ್ನು ಕೈಗೊಂಡು, ಬಿಲ್‌ನ ಮೊತ್ತ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?